## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಯಲಬುರ್ಗಾ ವಿಧಾನಸಭಾಕ್ಷೇತ್ರದ ಯಲಬುರ್ಗಾ ತಾಲ್ಲೂಕಿನ ಮುಧೋಳ ಗ್ರಾಮವನ್ನು ಆಯ್ಕೆ ಮಾಡುವ ಬಗ್ಗೆ.

ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2012 ದಿ:20.10.2014
2.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಪತ್ರ ಸಂಖ್ಯೆ: ಜಿಪಂಕೊ/ಅಭಿವೃದ್ಧಿ/ಸುಗ್ರಾಯೋ/2014-15 ದಿ:28.04.2015.
3.ಶ್ರೀ ಬಸವರಾಜ ರಾಯರೆಡ್ಡಿ, ವಿಧಾನಸಭಾ ಸದಸ್ಯರು, ಯಲಬುರ್ಗಾ ಮತಕ್ಷೇತ್ರ ಇವರ ಪತ್ರ ದಿನಾಂಕ:17.4.2015.

**ಪ್ರಸ್ತಾವನೆ:**

ಗ್ರಾಮಗಳ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮ ವಿಕಾಸ ಯೋಜನೆಯನ್ನು ಅಭಿವೃಧಿಪಡಿಸಲು ಉದ್ದೇಶಿಸಲಾಗಿದೆ. ಸದರಿ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರು ಉಲ್ಲೇಖಿತ (2)ರ ಪತ್ರದಲ್ಲಿ ತಿಳಿಸಿರುವಂತೆ ಮಾನ್ಯ ಶಾಸಕರು ಆಯ್ಕೆ ಮಾಡಿರುವ ಯಲಬುರ್ಗಾ ತಾಲ್ಲೂಕಿನ ಮುಧೋಳ ಗ್ರಾಮವನ್ನು ಈ ಹಿಂದೆ ಸುವರ್ಣ ಗ್ರಾಮೋದಯ ಯೋಜನೆಯ 2ನೇ ಹಂತದಡಿ ಆಯ್ಕೆಯಾಗಿದ್ದು ಮತ್ತು ಜನಸಂಖ್ಯೆ 6896 ಇರುವುದರಿಂದ ಸದರಿ ಗ್ರಾಮದ ಆಯ್ಕೆ ಕುರಿತು ಸರ್ಕಾರಕ್ಕೆ ಮಾರ್ಗದರ್ಶನ ಕೋರಿರುತ್ತಾರೆ.

ಮಾನ್ಯ ಶಾಸಕರು ಯಲಬುರ್ಗಾ ವಿಧಾನಸಭಾ ಕ್ಷೇತ್ರ ಇವರು ಮಾನ್ಯ ಸಚಿವರಿಗೆ ಉಲ್ಲೇಖ (3)ರಂತೆ ಪತ್ರ ಬರೆದು ಈ ಹಿಂದೆ ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆ ಮಾಡಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಆದರೆ ಅನುದಾನ ಸಾಕಾಗದೆ ಬಹುತೇಕ ಕಾಮಗಾರಿಗಳು ಅನುಷ್ಠಾನಗೊಳ್ಳದೆ ಯೋಜನೆಯು ಪೂರ್ಣಗೊಂಡಂತಾಗಿರುವುದಿಲ್ಲ. ಇದಕ್ಕೆ ಇನ್ನಷ್ಟು ಅನುದಾನ ಬಿಡುಗಡೆ ಮಾಡಿದರೆ ಪೂರ್ಣ ಕಾಮಗಾರಿಗಳನ್ನು ಅನುಷ್ಠಾನಕ್ಕೆ ತರಲು ಸಾಧ್ಯವಾಗುತ್ತದೆ. ಅದಕ್ಕಾಗಿ ಯಲುಬರ್ಗಾ ತಾಲ್ಲೂಕಿನ ಮುಧೋಳ ಗ್ರಾಮವೊಂದನ್ನೇ ಪುನ: ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಿಕೊಂಡು ಅಭಿವೃದ್ಧಿಪಡಿಸುವುದು ಅವಶ್ಯಕವಿರುವುದರಿಂದ ಇದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಅನುಮತಿಸಲು ಕೋರಿರುತ್ತಾರೆ.

ಯಲುಬರ್ಗಾ ತಾಲ್ಲೂಕಿನ ಮುಧೋಳ ಗ್ರಾಮವೊಂದನ್ನೇ ಗ್ರಾಮ ವಿಕಾಸ ಯೋಜನೆಯಡಿ ಅಭಿವೃದ್ಧಿಪಡಿಸಲು ವಿಶೇಷ ಪ್ರಕರಣವೆಂದು ಪರಿಗಣಿಸಿ ಆದೇಶ ಹೊರಡಿಸುವುದು ಸೂಕ್ತವೆಂದು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:16:ಗ್ರಾವಿಯೋ:2015. ಬೆಂಗಳೂರು, ದಿನಾಂಕ:24.06.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮ ವಿಕಾಸ ಯೋಜನೆಯಡಿ **ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ 6896 ಜನಸಂಖ್ಯೆಯಿರುವ ಮುಧೋಳ ಗ್ರಾಮವೊಂದಕ್ಕೆ ರೂ.3.75 ಕೋಟಿ ಅನುದಾನ ಹಂಚಿಕೆ ಮಾಡಿ** ಗ್ರಾಮ ವಿಕಾಸ ಯೋಜನೆಯಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಹೊರಡಿಸಲಾದ ಅನುದಾನದ ಮಿತಿಯಂತೆ ಕ್ರಮ ವಹಿಸುವುದು.

2. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿಗಳನ್ವಯ ಅನುಷ್ಠಾನಕ್ಕೆ ತರುವುದು.

3. ಗ್ರಾಮದಲ್ಲಿ ಪರಿಶಿಷ್ಠ ಜಾತಿ:ಪರಿಶಿಷ್ಠ ಪಂಗಡದ ಪ್ರದೇಶದ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವನ್ನು ಮಾರ್ಗಪಲ್ಲಟ ಮಾಡದೆ ಆ ಜನಾಂಗದವರು ವಾಸವಿರುವ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪ್ರತ್ಯೇಕ ಕ್ರಿಯಾ ಯೋಜನೆಯನ್ನು ತಯಾರಿಸಿಕೊಂಡು ಅನುಷ್ಠಾನಕ್ಕೆ ತರುವುದು.
4. ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕವಾಗಿ ನಿರ್ವಹಿಸುವುದು ಹಾಗೂ ಆಯಾ ಕಾರ್ಯಕ್ರಮಗಳ ಅನುದಾನಕ್ಕೆ ಸರ್ಕಾರ ಹೊರಡಿಸಿದ ಆದೇಶ/ಮಾರ್ಗಸೂಚಿ/ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬೂವನಹಳ್ಳಿನಾಗರಾಜ್)**
ನಿರ್ದೇಶಕರು(ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಕೊಪ್ಪಳ
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಸರ್ಕಾರದ ಪ್ರಧಾನ ಮುಖ್ಯ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ
8. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ಶ್ರೀ.ಬಸವರಾಜ ರಾಯರೆಡ್ಡಿ, ವಿಧಾನಸಭಾ ಸದಸ್ಯರು, ಯಲಬುರ್ಗಾ ಮತಕ್ಷೇತ್ರ
11. ಸಂಪಾದಕರು, ಕರ್ನಾಟಕ ವಿಕಾಸ, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
12. ಹೆಚ್ಚುವರಿ.